ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 30/10/2019

ಉದ್ಧಾರ ಭಾರೀ ಪ್ರಮಾಣದ ವಿದ್ಯುತ್ ಬಿಲ್

# ಯುಪಿ ಶಾಸಕ, ಅಧಿಕಾರಿಗಳ 13000 ಕೋಟಿ ಬಿಲ್ ಬಾಕಿ

30/10/19

ಲಖನೌ: ಉತ್ತರಪ್ರದೇಶದ ಸಚಿವರು, ಶಾಸಕರು ಮತ್ತು ಸರ್ಕಾರದ ಇಲಾಖೆ ಅಧಿಕಾರಿಗಳೇ 13 ಸಾವಿರ ಕೋಟಿ ರು. ಮೌಲ್ಯದ ವಿದ್ಯುತ್ ಬಿಲ್ ಪಾವತಿಯನ್ನು ಬಾಕಿ ಉಳಿಸಿಕೊಂಡ ವಿಚಾರ ಇದೀಗ ಬೆಳಕಿಗೆ ಬಂದಿದೆ. ಈ ಹಿನ್ನೆಲೆ ಸಚಿವರು, ಶಾಸಕರು ಮತ್ತು ಸರ್ಕಾರದ



ಇಲಾಖೆಗಳ ಕಚೇರಿಗಳು ಮತ್ತು ನಿವಾಸಗಳಿಗೆ ಪ್ರೀ-ಪೇಡ್ (ಮೊದಲೇ ಪಾವತಿ ಮಾಡಬೇಕಾದ) ಮೀಟರ್‌ಗಳನ್ನು ಅಳವಡಿಸಲು ಸಿಎಂ ಯೋಗಿ ಆದಿತ್ಯನಾಥ್ ಸರ್ಕಾರ ನಿರ್ಧರಿಸಿದೆ. ಈ ಬಗ್ಗೆ ಪ್ರತಿಕ್ರಿಯಿಸಿದ ಉತ್ತರ ಪ್ರದೇಶ ಇಂಧನ ಸಚಿವ ಶ್ರೀಕಾಂತ್ ಶರ್ಮಾ, ಶಾಸಕರು, ಸಚಿವರು ಹಾಗೂ ಹಿರಿಯ ಅಧಿಕಾರಿಗಳೇ 13 ಸಾವಿರ ಕೋಟಿ ರು. ಬಾಕಿ ಉಳಿಸಿಕೊಂಡಿದ್ದಾರೆ. ಅಲ್ಲದೆ, ವಿದ್ಯುತ್ ಬಿಲ್ ಬಾಕಿ ಉಳಿಸಿಕೊಂಡವರ ಹೀಗಾಗಿ, ಮುಂದಿನ ದಿನಗಳಲ್ಲಿ ವಿದ್ಯುತ್ ಬಿಲ್ ಪಾವತಿ ಪರಿಶೀಲನೆಗೆ ಎಲ್ಲ ಕಚೇರಿ, ಶಾಸಕರು ಹಾಗೂ ಸಚಿವರ ನಿವಾಸಗಳಿಗೆ ಪ್ರೀ-ಪೇಡ್ ಮೀಟರ್‌ಗಳನ್ನು ಅಳವಡಿಸಲಾಗುತ್ತದೆ. ಜೊತೆಗೆ, ಹಿಂದಿನ ಬಾಕಿ ಪಾವತಿಗಾಗಿ ಇಲಾಖೆಗಳು, ಸಚಿವರು ಮತ್ತು ಶಾಸಕರಿಗೆ ಕಂತಿನ ಅವಕಾಶವನ್ನು ನೀಡಲಾಗುತ್ತದೆ ಎಂದು ಹೇಳಿದ್ದಾರೆ.